11868

## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 858 |
| ಮಾನ್ಯ ಸದಸ್ಯರ ಹೆಸರು | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸುವ ದಿನಾಂಕ | 26/12/2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು ಹೊಸದಾಗಿ 24 AIIMS ಆಸ್ಪತ್ರೆಗಳನ್ನು ಸ್ಥಾಪಿಸಲು ಘೋಷಿಸಿದ್ದು, ಕರ್ನಾಟಕದಲ್ಲಿಯೂ ಒಂದನ್ನು ನಿರ್ಮಾಣ ಮಾಡಲು ಘೋಷಿಸಿದ್ದು, ಇದರ ನಿರ್ಮಾಣಕ್ಕಾಗಿ ಮೀಸಲಿಟ್ಟ ಅನುದಾನವೆಷ್ಟು; ಇದರಲ್ಲಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲು ಎಷ್ಟು; | ಭಾರತ ಸರ್ಕಾರದ "ಪ್ರಧಾನ ಮಂತ್ರಿ ಸ್ವಸ್ಥ ಸುರಕ್ಷಾ ಯೋಜನೆ"ಯಡಿ "ಆಲ್ ಇಂಡಿಯಾ ಇನ್ಸ್‌ಟಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್‌ಸ್" (AIIMS) ಎಂಬ ಸೂಪರ್ ಸ್ಪೆಷಾಲಿಟಿ ಬೋಧಕ ಸಂಸ್ಥೆಯನ್ನು ವಿವಿಧ ರಾಜ್ಯಗಳಲ್ಲಿ ಪ್ರಾರಂಭಿಸುವ ಹೊಣೆಯು ಭಾರತ ಸರ್ಕಾರದ್ದಾಗಿರುತ್ತದೆ. ಅದರಂತೆ ಇಂತಹ ಸಂಸ್ಥೆಯನ್ನು ಹೊಂದುವ ರಾಜ್ಯಗಳಲ್ಲಿ ಕರ್ನಾಟಕ ರಾಜ್ಯವು ಒಂದಾಗಿರುತ್ತದೆ. ಸದರಿ ಏಮ್ಸ್ ಆಸ್ಪತ್ರೆಯ ನಿರ್ಮಾಣ ಕಾಮಗಾರಿಗೆ ಕೇಂದ್ರ ಸರ್ಕಾರವು ಮೀಸಲಿಟ್ಟ ಅನುದಾನದ ವಿವರ ಲಭ್ಯವಿರುವುದಿಲ್ಲ. |
| ಆ) | ಕರ್ನಾಟಕದ ಯಾವ ಜಿಲ್ಲೆಯಲ್ಲಿ ಈ ಆಸ್ಪತ್ರೆಯನ್ನು ನಿರ್ಮಿಸಲು ಯೋಜನೆ ರೂಪಿಸಲಾಗಿದೆ. | ಪ್ರಾರಂಭಿಕವಾಗಿ ರಾಮನಗರ, ಧಾರವಾಡ, ಬಿಜಾಪುರ, ಕಲಬುರಗಿ ಈ ಜಿಲ್ಲೆಗಳಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿತ್ತು.<br><br>ಜಿಲ್ಲಾಧಿಕಾರಿಗಳ ಕಾರ್ಯಾಲಯ, ಧಾರವಾಡ ಇವರ ದಿನಾಂಕ 18/09/2020 ರ ಪತ್ರದಲ್ಲಿ ಧಾರವಾಡ ತಾಲ್ಲೂಕಿನ ಇಟಗಟ್ಟಿ ಗ್ರಾಮದಲ್ಲಿ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂ ಸ್ವಾಧೀನ ಪಡಿಸಿಕೊಂಡಿರುವ ಜಾಗವು ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವುದಕ್ಕೆ ಹಾಗೂ ಕೇಂದ್ರ ಸರ್ಕಾರವು ನಿಗಧಿ ಪಡಿಸಿರುವ ಮಾನದಂಡಗಳನ್ನು ಪೂರೈಸಲು ಸದರಿ ಸ್ಥಳವು ಸೂಕ್ತವೆಂದು ನಿರ್ಣಯಕ್ಕೆ ಬಂದು, ಹುಬ್ಬಳ್ಳಿ-ಧಾರವಾಡದಲ್ಲಿನ ಜಾಗ ಮತ್ತು ಇತರೆ ಮಾಹಿತಿಯೊಂದಿಗೆ ಕೇಂದ್ರ ಸರ್ಕಾರಕ್ಕೆ ದಿನಾಂಕ 29/09/2020 ರಂದು ಪತ್ರ ಬರೆಯಲಾಗಿದೆ. ಕೇಂದ್ರ ಸರ್ಕಾರದ ತಪಾಸಣಾ ತಂಡವು ಈಗಾಗಲೇ ಗುರುತಿಸಲ್ಪಟ್ಟ ಜಾಗಕ್ಕೆ ದಿನಾಂಕ 02/12/2020 ರಂದು ಬೇಟಿ ನೀಡಿ ಪರಿವೀಕ್ಷಣೆ ಮಾಡಿರುತ್ತಾರೆ. ಈವರೆವಿಗೂ ಕೇಂದ್ರ ಸರ್ಕಾರದಿಂದ ಯಾವುದೇ ಮಾಹಿತಿ ಸ್ವೀಕೃತವಾಗಿರುವುದಿಲ್ಲ.<br>ರಾಯಚೂರು ಜಿಲ್ಲೆಗೆ ಏಮ್ಸ್ ಮಾದರಿಯ ಸಂಸ್ಥೆಯನ್ನು ಮಂಜೂರು ಮಾಡುವಂತೆ ಹಿಂದಿನ ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರಿಂದ ಸನ್ಮಾನ್ಯ ಪ್ರಧಾನ ಮಂತ್ರಿಗಳು, ಭಾರತ ಸರ್ಕಾರ ಇವರಿಗೆ ದಿನಾಂಕ 09/04/2021 ರಂದು ಪತ್ರ ಬರೆಯಲಾಗಿರುತ್ತದೆ.<br>ಕೇಂದ್ರ ಸರ್ಕಾರವು ಪರಿವೀಕ್ಷಣೆ ಮಾಡಿದ ಹಿನ್ನೆಲೆಯಲ್ಲಿ ಏಮ್ಸ್ ಸಂಸ್ಥೆಯನ್ನು ಹುಬ್ಬಳ್ಳಿ-ಧಾರವಾಡದಲ್ಲಿ ಸ್ಥಾಪಿಸಲು ಮನವಿ ಮಾಡಿ ಕೇಂದ್ರ ಸರ್ಕಾರಕ್ಕೆ ದಿನಾಂಕ 30/09/2021 ರಂದು ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ಇವರು ಪತ್ರ ಬರೆದಿರುತ್ತಾರೆ. |
| ಇ) | ಈ AIIMS ಆಸ್ಪತ್ರೆಯನ್ನು ಉತ್ತರ ಕರ್ನಾಟಕದ ಕೇಂದ್ರ ಸ್ಥಾನವಾದ ಬಾಗಲಕೋಟೆಯಲ್ಲಿ ನಿರ್ಮಿಸಲು ಯಾವುದಾದರೂ ಪ್ರಸ್ತಾವನೆಗಳು ಬಂದಿವೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; ಇಲ್ಲಿ ನಿರ್ಮಿಸಿದರೆ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳಿಗೆ ಅನುಕೂಲವಾಗಲಿದ್ದು, ಈ ಬಗ್ಗೆ ಸರ್ಕಾರದ ನಿಲುವೇನು? | AIIMS ಆಸ್ಪತ್ರೆಯನ್ನು ಉತ್ತರ ಕರ್ನಾಟಕದ ಕೇಂದ್ರ ಸ್ಥಾನವಾದ ಬಾಗಲಕೋಟೆಯಲ್ಲಿ ನಿರ್ಮಿಸುವ ಬಗ್ಗೆ ಸರ್ಕಾರದ ಹಂತದಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.<br><br>ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸುವ ಯೋಜನೆಯು ಕೇಂದ್ರ ಸರ್ಕಾರದ್ದಾಗಿರುವುದರಿಂದ ಇದುವರೆವಿಗೂ ಕರ್ನಾಟಕ ರಾಜ್ಯದ ಯಾವುದೇ ಸ್ಥಳದಲ್ಲಿ ಏಮ್ಸ್ ಸಂಸ್ಥೆಯನ್ನು ಪ್ರಾರಂಭಿಸಿರುವುದಿಲ್ಲ. |

ಸಂಖ್ಯೆ: ಎಂಇಡಿ 682 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು



ated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 16/12/2022 06 37 PM